**ಕರ್ನಾಟಕ ಸರ್ಕಾರ**

ಸಂ. ಕಂಇ 341 ಟಿಎನ್‌ಆರ್ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:12-08-2021

# ಆದೇಶ

**ವಿಷಯ:** 2021ನೇ ವರ್ಷದ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ನಡೆಯಲಿರುವ ಗಣೇಶ ಚತುರ್ಥಿ, ಮೊಹರಂ ಮತ್ತು ಇತರೆ ಹಬ್ಬಗಳ ಆಚರಣೆ ಸಂದರ್ಭದಲ್ಲಿ ಕೋವಿಡ್-19 ಸೋಂಕು ನಿಯಂತ್ರಣ ತಡೆಗಟ್ಟಲು ಅನುಸರಿಸಬೇಕಾದ ಮಾರ್ಗಸೂಚಿಗಳು.

**ಓದಲಾಗಿದೆ:**
1) ಕಣ್ಗಾವಲು, ನಿಯಂತ್ರಣ ಮತ್ತು ಜಾಗೃತೆ ಮಾರ್ಗಸೂಚಿಗಳನ್ನು ಹೊರಡಿಸಲಾದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ:03-07-2021 ಮತ್ತು 18.07.2021.
2) ಅಗತ್ಯವಿದ್ದಲ್ಲಿ ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ವಿಧಿಸುವಂತೆ, ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ಮತ್ತು ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿ ಹೊರಡಿಸಿರುವ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ:30.07.2021.
3) ಮುಂಬರುವ ಹಬ್ಬಗಳ ಕಾಲಾವಧಿಯಲ್ಲಿ ಜನದಟ್ಟಣೆ ಮತ್ತು ಒಗ್ಗೂಡುವಿಕೆಗಳನ್ನು ತಡೆಗಟ್ಟುವ ಕುರಿತು ಹೊರಡಿಸಲಾದ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಪತ್ರ ಸಂಖ್ಯೆ:04/COVID/fest/AS(H)/2021, ದಿನಾಂಕ:04.08.2021.
4) ಕೋವಿಡ್-19 ಹರಡುವಿಕೆಯನ್ನು ತಡೆಗಟ್ಟಲು ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸಲಾದ ಇದೇ ಸಮ ಸಂಖ್ಯೆಯ ಆದೇಶ ದಿನಾಂಕ:06.08.2021.

*****

ಮೇಲೆ ಓದಲಾದ (3)ರ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದ ಅರೆ ಸರ್ಕಾರಿ ಪತ್ರದಲ್ಲಿ 2021ರ ಆಗಸ್ಟ್ ರಿಂದ ಅಕ್ಟೋಬರ್ ಮಾಹೆಯಲ್ಲಿ ಆಚರಿಸಲಾಗುವ ಹಬ್ಬಗಳಾದ ಮೊಹರಂ, ಶ್ರೀ ಕೃಷ್ಣ ಜನ್ಮಾಷ್ಟಮಿ, ಗಣೇಶ ಚತುರ್ಥಿ, ದುರ್ಗಾ ಪೂಜೆ ಮೊದಲಾದ ಹಬ್ಬಗಳನ್ನು ಆಚರಿಸುವಾಗ ಜನದಟ್ಟಣೆ ಮತ್ತು ಒಗ್ಗೂಡುವಿಕೆಗಳನ್ನು ತಡೆಗಟ್ಟಲು ಸ್ಥಳೀಯ ನಿರ್ಬಂಧಗಳನ್ನು ವಿಧಿಸುವಂತೆ, ಸಲಹೆ ನೀಡಲಾಗಿದೆ.

ಕೋವಿಡ್ 19 ಸಾಂಕ್ರಾಮಿಕ ಸೋಂಕನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿದೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಕೋವಿಡ್ 19 ಸಾಂಕ್ರಾಮಿಕ ಸೋಂಕು ಹೆಚ್ಚಿನ ರೀತಿಯಲ್ಲಿ ಹರಡದಂತೆ ಈ ಸೋಂಕಿನ ಸರಪಳಿಯನ್ನು ಮುರಿಯಲು ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಇರುತ್ತದೆ.

ಮೇಲೆ ಓದಲಾದ (1)ರ ಮಾರ್ಗಸೂಚಿಯಲ್ಲಿನ ಕಂಡಿಕೆ (1)ರ ಉಪ ಕಂಡಿಕೆ (4)ರಲ್ಲಿ ಸಾಮಾಜಿಕ/ರಾಜಕೀಯ/ಕ್ರೀಡಾ/ಮನೋರಂಜನೆ/ಶೈಕ್ಷಣಿಕ/ಸಾಂಸ್ಕೃತಿಕ/ಧಾರ್ಮಿಕ ಕಾರ್ಯಕ್ರಮ/ ಇತರೆ ಒಗ್ಗೂಡುವಿಕೆಗಳನ್ನು ಮತ್ತು ಬೃಹತ್ ಸಭೆ-ಸಮಾರಂಭಗಳನ್ನು ನಿಷೇಧಿಸಲಾಗಿದೆ.

ಮೇಲೆ ಓದಲಾದ (4)ರ ಆದೇಶದಲ್ಲಿ ಪೂಜಾ ಸ್ಥಳಗಳು (ದೇವಸ್ಥಾನಗಳು, ಮಸೀದಿಗಳು, ಚರ್ಚ್‌ಗಳು, ಗುರುದ್ವಾರಗಳು ಮತ್ತು ಇತರೆ ಧಾರ್ಮಿಕ ಸ್ಥಳಗಳು) ತೆರೆಯಲು ಮತ್ತು ಕೋವಿಡ್-19 ಸಮುಚಿತ ವರ್ತನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಷರತ್ತಿಗೊಳಪಟ್ಟು ಪೂಜಾ ಕಾರ್ಯಗಳನ್ನು ಕೈಗೊಳ್ಳಲು ಅನುಮತಿಸಿದೆ. ಆದರೆ, ಜಾತ್ರೆಗಳು, ದೇವಾಲಯದ ಹಬ್ಬಗಳು, ಮೆರವಣಿಗೆ ಮತ್ತು ಸಭೆ – ಸಮಾರಂಭಗಳಿಗೆ ಅನುಮತಿ ಇರುವುದಿಲ್ಲ. ಮುಂದುವರೆದು, ಹಬ್ಬದ ದಿನಗಳು ಮತ್ತು ಸಾಮೂಹಿಕ ಸಭೆ-ಸಮಾರಂಭಗಳಿಗೆ ಅಗತ್ಯವಿದ್ದಲ್ಲಿ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸಾರ್ವಜನಿಕರ ಹಿತದೃಷ್ಟಿಯಿಂದ ಸ್ಥಳೀಯ ನಿರ್ಬಂಧಗಳನ್ನು ವಿಧಿಸುವಂತೆ ಆದೇಶಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 24(ಎಲ್) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರ ನಿರ್ದೇಶನದಂತೆ, ಈ ಕೆಳಗೆ ಸಹಿ ಮಾಡಿರುವ ನಾನು, ಮುಂಬರಲಿರುವ ಮೊಹರಂ ಮತ್ತು ಗಣೇಶೋತ್ಸವವನ್ನು ಆಚರಿಸುವ ಸಂಬಂಧವಾಗಿ ಈ ಆದೇಶದ 'ಅನುಬಂಧ'ದಲ್ಲಿರುವಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ.

ಈ ಮಾರ್ಗಸೂಚಿಗಳನ್ನು ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಪೊಲೀಸ್ ಆಯುಕ್ತರುಗಳು, ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸತಕ್ಕದ್ದು ಮತ್ತು ಸದರಿ ಮಾರ್ಗಸೂಚಿಗಳನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 51 ರಿಂದ 60ರನ್ವಯ ಮತ್ತು ಭಾರತ ದಂಡ ಸಂಹಿತೆಯ 188ನೇ ಪ್ರಕರಣದಡಿ ಹಾಗೂ ಅನ್ವಯವಾಗಬಹುದಾದ ಇತರ ಕಾನೂನು ಉಪಬಂಧಗಳಡಿಯಲ್ಲಿ ಕಾನೂನು ಕ್ರಮ ಕೈಗೊಳ್ಳತಕ್ಕದ್ದು.

(ತುಷಾರ್ ಗಿರಿನಾಥ್, ಭಾ.ಆ.ಸೇ.)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ (ವಿ.ನಿ) ಮತ್ತು
ಸದಸ್ಯ ಕಾರ್ಯದರ್ಶಿ, ರಾಜ್ಯ ಕಾರ್ಯಕಾರಿ ಸಮಿತಿ.

**ಇವರಿಗೆ:**

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.
2. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ/ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರುಗಳು/ಎಲ್ಲಾ ಮಹಾನಗರಗಳ ಪೊಲೀಸ್ ಆಯುಕ್ತರು
4. ಎಲ್ಲಾ ಇಲಾಖಾ ಮುಖ್ಯಸ್ಥರು.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.

**ಸರ್ಕಾರದ ಆದೇಶ ಸಂಖ್ಯೆ:ಕಂಇ 341 ಟಿಎನ್‌ಆರ್ 2021,ದಿನಾಂಕ:12-08-2021ಕ್ಕೆ ಅನುಬಂಧ**

(ಅ) ಮೊಹರಂ ಹಬ್ಬವನ್ನು ಆಚರಿಸುವ ಸಂಬಂಧದ ಮಾರ್ಗಸೂಚಿಗಳು

1) ಸಾರ್ವಜನಿಕ ಸ್ಥಳಗಳಲ್ಲಿ ಆಲಂಗಳನ್ನು/ಪಂಜಾವನ್ನು ಸ್ಥಾಪಿಸುವುದನ್ನು ಹಾಗೂ ತಾಜಿಯಾವನ್ನು ನಿರ್ಬಂಧಿಸಲಾಗಿದೆ. ಮುಂದುವರೆದು, ದಿನಾಂಕ:12.08.2021 ರಿಂದ 20.08.2021 ರವರೆಗೆ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮೊಹರಂ ಪ್ರಾರ್ಥನಾ ಸಭೆ ಮತ್ತು ಮೆರವಣಿಗೆಯನ್ನು ನಿಷೇಧಿಸಲಾಗಿದೆ. ಮೊಹರಂ ಸಂಬಂಧಿತ ಆಚರಣೆಗಳಲ್ಲಿ ಭಾಗವಹಿಸುವ ಭಕ್ತಾದಿಗಳು ಸೂಕ್ತ ಸಾಮಾಜಿಕ ಅಂತರದೊಂದಿಗೆ ಕನಿಷ್ಠ ಸಂಖ್ಯೆಯಲ್ಲಿ ಭಾಗವಹಿಸುವುದು.

2) ಪಂಜ, ಆಲಂ ಮತ್ತು ತಾಜಿಯತ್‌ಗಳನ್ನು ಸಾರ್ವಜನಿಕರು ಮುಟ್ಟದೆ ದೂರದಿಂದ ನೋಡತಕ್ಕದ್ದು.

3) ಖಬರಸ್ತಾನ್ ಒಳಗೊಂಡಂತೆ ಯಾವುದೇ ಖಾಲಿ ಜಾಗಗಳಲ್ಲಿ ಯಾವುದೇ ತರಹದ ಸಭೆ ಏರ್ಪಡಿಸುವುದನ್ನು ನಿರ್ಬಂಧಿಸಲಾಗಿದೆ. ಖಬರಸ್ತಾನ್‌ಗಳಿಗೆ ಕೇವಲ ದಫನ ಮಾಡಲು ಮಾತ್ರ ಅನುಮತಿ ನೀಡಿದ್ದು, ಮೊಹರಂಗೆ ಸಂಬಂಧಿಸಿದ ಆಚರಣೆಗಳಿಗೆ ಅನುಮತಿ ಇರುವುದಿಲ್ಲ.

4) ಪ್ರಾರ್ಥನಾ ಸ್ಥಳಗಳಲ್ಲಿ ಮುಖ ಗವಸನ್ನು ಕಡ್ಡಾಯವಾಗಿ ಧರಿಸತಕ್ಕದ್ದು.

5) 60 ವರ್ಷಕ್ಕಿಂತ ಮೇಲ್ಪಟ್ಟವರು ಹಾಗೂ 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮನೆಯಲ್ಲಿಯೇ ಪ್ರಾರ್ಥನೆ ಮಾಡತಕ್ಕದ್ದು.

6) ಕೋವಿಡ್-19 ಸಮುಚಿತ ವರ್ತನೆಗಳೊಂದಿಗೆ, ಮಸೀದಿಯಲ್ಲಿ ಸಾಮೂಹಿಕ ಪ್ರಾರ್ಥನೆಯನ್ನು ನಡೆಸತಕ್ಕದ್ದು. ಒಂದು ವೇಳೆ ಹೆಚ್ಚು ಜನರು ಆಗಮಿಸಿದ್ದಲ್ಲಿ, ಎರಡು ಅಥವಾ ಹೆಚ್ಚಿನ ಪಾಳಿಯಲ್ಲಿ ಸಾಮೂಹಿಕ ಪ್ರಾರ್ಥನೆಯನ್ನು ನಡೆಸತಕ್ಕದ್ದು.

7) ಕೋವಿಡ್-19 ಸಮುಚಿತ ವರ್ತನೆಯಂತೆ ಮಸೀದಿಗಳಲ್ಲಿ ನಮಾಜ್ ನಿರ್ವಹಿಸುವವರ ಮಧ್ಯ ಕನಿಷ್ಠ 6 ಅಡಿ ಅಂತರ ಕಾಯ್ದುಕೊಳ್ಳತಕ್ಕದ್ದು, ಆಗಾಗ ಕೈಗಳನ್ನು ಸೋಪು ಮತ್ತು ಸ್ಯಾನಿಟೈಸರ್‌ಗಳಿಂದ ಶುಚಿಗೊಳಿಸಿಕೊಳ್ಳತಕ್ಕದ್ದು. ಮಸೀದಿಗಳಲ್ಲಿ ಪ್ರವೇಶಿಸುವ ಮೊದಲು, ದೇಹದ ತಾಪಮಾನವನ್ನು ತಪಾಸಣೆ ಮಾಡತಕ್ಕದ್ದು.

8) ಭಕ್ತಾದಿಗಳು ಪ್ರವೇಶಿಸುವ ದ್ವಾರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗುಂಪುಗೂಡುವುದನ್ನು ತಡೆಗಟ್ಟುವುದು. ಆಡಳಿತ ಮಂಡಳಿ/ಮುತವಲ್ಲಿ/ಆಡಳಿತಾಧಿಕಾರಿ ಇವರು ಭಕ್ತಾದಿಗಳು ಕುಳಿತುಕೊಳ್ಳುವ ಗರಿಷ್ಠ ಸಂಖ್ಯೆಯನ್ನು ಮುಖ್ಯದ್ವಾರದ ಬಳಿ ಪ್ರದರ್ಶಿಸುವುದು.

9) ಮಸೀದಿಗಳಲ್ಲಿ ಪ್ರಾರ್ಥನೆಯಲ್ಲಿ ಭಾಗವಹಿಸುವವರು ತಮ್ಮ ತಮ್ಮ ಮನೆಗಳಿಂದ ಮುಸಲ್ಲಾವನ್ನು (ಜಾಯನಮಾಜ್) ಕಡ್ಡಾಯವಾಗಿ ತರತಕ್ಕದ್ದು. ಪರಸ್ಪರ ಹಸ್ತಲಾಘವ ಮತ್ತು ಆಲಿಂಗನಗಳನ್ನು ಮಾಡತಕ್ಕದ್ದಲ್ಲ.

10) ಮಸೀದಿಗಳನ್ನು ಹೊರತುಪಡಿಸಿ ಇತರೆ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಅಂದರೆ, ಸಭಾಂಗಣ, ಸಮುದಾಯ ಭವನ, ಶಾದಿ ಮಹಲ್ ಮತ್ತಿತರ ತೆರೆದ ಜಾಗಗಳಲ್ಲಿ ಮೊಹರಂ ಹಬ್ಬದ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆಯನ್ನು ಆಯೋಜಿಸುವಂತಿಲ್ಲ.

11) ಮೊಹರಂ ಪ್ರಯುಕ್ತ ಯಾವುದೇ ರೀತಿಯ ಮೆರವಣಿಗೆ / ಸಾರ್ವಜನಿಕ ಸ್ಥಳಗಳಲ್ಲಿ ಭಾಷಣ ಕಾರ್ಯಕ್ರಮಗಳನ್ನು ಆಯೋಜಿಸುವಂತಿಲ್ಲ.

12) ಭಕ್ತಾದಿಗಳು ಯಾವ ಯಾವ ಕೆಲಸವನ್ನು ನಿರ್ವಹಿಸುವುದು/ಯಾವ ಯಾವ ಕೆಲಸವನ್ನು ನಿರ್ವಹಿಸಬಾರದು ಎಂಬ ಬಗ್ಗೆ ಧ್ವನಿ ವರ್ಧಕದ ಮೂಲಕ ಸೂಚಿಸುವುದು.

(ಆ) ಗಣೇಶ ಹಬ್ಬವನ್ನು ಆಚರಿಸುವ ಸಂಬಂಧದ ಮಾರ್ಗಸೂಚಿಗಳು

1) ಗಣೇಶ ಚತುರ್ಥಿ ಹಬ್ಬವನ್ನು ಸರಳ ರೀತಿಯಲ್ಲಿ, ಭಕ್ತಿಪೂರ್ವಕವಾಗಿ ದೇವಸ್ಥಾನದೊಳಗೆ ಮತ್ತು ತಮ್ಮ ತಮ್ಮ ಮನೆಗಳಲ್ಲಿ ಆಚರಿಸತಕ್ಕದ್ದು. ಇದನ್ನು ಹೊರತುಪಡಿಸಿ, ಬೇರೆ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ, ಹೊರಾಂಗಣಗಳಲ್ಲಿ ಚಪ್ಪರ/ಪೆಂಡಾಲ್/ಶಾಮಿಯಾನ ವೇದಿಕೆಗಳನ್ನು ನಿರ್ಮಿಸಿ ಗೌರಿ-ಗಣೇಶ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡುವಂತಿಲ್ಲ.

2) ಗಣೇಶ ಮೂರ್ತಿಗಳನ್ನು ತರುವಾಗ ಹಾಗೂ ವಿಸರ್ಜಿಸುವಾಗ ಯಾವುದೇ ರೀತಿಯ ಮೆರವಣಿಗೆ / ಮನೋರಂಜನಾ ಕಾರ್ಯಕ್ರಮಗಳನ್ನು ಆಯೋಜಿಸುವಂತಿಲ್ಲ.

3) ಪಾರಂಪರಿಕ ಗೌರಿ-ಗಣೇಶ ಮೂರ್ತಿಯನ್ನು ಪೂಜಿಸುವವರು ಅವುಗಳನ್ನು ಮನೆಯಲ್ಲಿಯೇ ವಿಸರ್ಜಿಸುವುದು ಅಥವಾ ಮೂರ್ತಿಗಳನ್ನು ಅತೀ ಸಮೀಪವಾಗುವಂತಹ ಮಾರ್ಗಗಳನ್ನು ಬಳಸಿಕೊಂಡು ಮಹಾನಗರ ಪಾಲಿಕೆ / ಜಿಲ್ಲಾಡಳಿತ / ಹತ್ತಿರದ ಸ್ಥಳೀಯ ಸಂಸ್ಥೆಗಳ / ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಈಗಾಗಲೇ ನಿರ್ಮಿಸಲಾದ ಹೊಂಡ, ಕಲ್ಯಾಣಿ ಅಥವಾ ಮೊಬೈಲ್ ಟ್ಯಾಂಕ್‌ಗಳಲ್ಲಿ ಅಥವಾ ಕೃತಕ ವಿಸರ್ಜನಾ ಟ್ಯಾಂಕರ್‌ಗಳಲ್ಲಿ ವಿಸರ್ಜಿಸತಕ್ಕದ್ದು.

4) ಗಣೇಶ ಚತುರ್ಥಿ ಆಚರಿಸುವ ದೇವಸ್ಥಾನಗಳಲ್ಲಿ ದಿನನಿತ್ಯ, ಸ್ಯಾನಿಟೈಸೇಷನ್ ಮಾಡತಕ್ಕದ್ದು. ಸಾರ್ವಜನಿಕ ದರ್ಶನಕ್ಕಾಗಿ ಆಗಮಿಸುವ ಭಕ್ತಾಧಿಗಳಿಗೆ ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ರೀನಿಂಗ್ ವ್ಯವಸ್ಥೆಯನ್ನು ಕಲ್ಪಿಸತಕ್ಕದ್ದು.

5) ದರ್ಶನಕ್ಕಾಗಿ ಬರುವ ಭಕ್ತರಿಗೆ ಕೋವಿಡ್-19 ಸಮುಚಿತ ವರ್ತನೆಯಂತೆ ಕಡ್ಡಾಯವಾಗಿ ಮುಖಗವಸನ್ನು ಧರಿಸುವುದು, ಕನಿಷ್ಠ 06 ಅಡಿ ಸಾಮಾಜಿಕ ಅಂತರವನ್ನು ಗುರುತಿಸುವುದು ಹಾಗೂ ಅದನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಎಲ್ಲಾಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

6) ಗಣೇಶೋತ್ಸವ ಆಚರಣೆ ಕಾಲಕ್ಕೆ ಸಂದರ್ಭಕ್ಕನುಗುಣವಾಗಿ ಸರ್ಕಾರ, ಜಿಲ್ಲಾಡಳಿತ, ಪೊಲೀಸ್, ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆ ಪ್ರಾಧಿಕಾರಗಳಿಂದ ಹೊರಡಿಸಲಾಗುವ ಎಲ್ಲಾ ಆದೇಶ / ನಿರ್ದೇಶನ ಹಾಗೂ ಸೂಚನೆಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು

ಕೋವಿಡ್-19 ಸಾಂಕ್ರಾಮಿಕ ಸೋಂಕು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರವು ಹೊರಡಿಸಿದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಅಲ್ಲದೇ, ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅಗ್ನಿಶಾಮಕ ಇಲಾಖೆ, ಜಿಲ್ಲಾಡಳಿತ ಹಾಗೂ ಇತರೆ ಇಲಾಖೆಗಳಿಂದ ಹೊರಡಿಸಲಾದ ಸೂಚನೆಗಳು/ಮಾರ್ಗಸೂಚಿಗಳು/ಪ್ರಮಾಣಿತ ಕಾರ್ಯವಿಧಾನ (SOP)ಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು.

ದಿನಾಂಕ:06.08.2021ರ ಮಾರ್ಗಸೂಚಿಯಲ್ಲಿ ಮನೋರಂಜನೆ/ಸಾಂಸ್ಕೃತಿಕ/ಧಾರ್ಮಿಕ ಕಾರ್ಯಕ್ರಮಗಳು/ ಇತರೆ ಒಗ್ಗೂಡುವಿಕೆಗಳನ್ನು ಮತ್ತು ಬೃಹತ್ ಸಭೆ-ಸಮಾರಂಭಗಳನ್ನು ನಿಷೇಧಿಸಲಾಗಿದ್ದು, ಜಾತ್ರೆಗಳು, ದೇವಾಲಯದ ಹಬ್ಬಗಳು, ಮೆರವಣಿಗೆ ಮತ್ತು ಸಭೆ – ಸಮಾರಂಭಗಳಿಗೆ ಅನುಮತಿ ನೀಡಲಾಗಿರುವುದಿಲ್ಲ. ಆದ್ದರಿಂದ ಮೇಲ್ಕಂಡ ಹಬ್ಬಗಳ ಸಂದರ್ಭದಲ್ಲಿ ಯಾವುದೇ ವಿಧದ ಮೆರವಣಿಗೆಯನ್ನು, ಜನರ ಒಗ್ಗೂಡುವಿಕೆಯನ್ನು ಮಾಡತಕ್ಕದ್ದಲ್ಲ.

ಹಬ್ಬ ಹರಿದಿನಗಳು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮರಸ್ಯಗಳು ಉಂಟಾಗಲು ಪೂರಕವಾಗಿರುವುದರಿಂದ ಮೊಹರಂ ಮತ್ತು ಗಣೇಶೋತ್ಸವ ಹಬ್ಬವನ್ನು ಅದೇ ರೀತಿಯಿಂದಲೇ ಆಚರಿಸುವ ಮೂಲಕ ಸಮಾಜದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ಭಂಗ ಬಾರದಂತೆ ಕಾಪಾಡುವುದು.

(ತುಷಾರ್ ಗಿರಿನಾಥ್, ಭಾ.ಆ.ಸೇ.)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ (ವಿ.ನಿ) ಮತ್ತು
ಸದಸ್ಯ ಕಾರ್ಯದರ್ಶಿ, ರಾಜ್ಯ ಕಾರ್ಯಕಾರಿ ಸಮಿತಿ.